Akashvani : Bangalore

Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

23.06.2026 18.40 hrs

---

ಮುಖ್ಯಾಂಶಗಳು

- ೧. ನವದೆಹಲಿಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಎರಡನೇ ಹಂತದ ಪದ್ಮಪ್ರಶಸ್ತಿ ಪ್ರದಾನ- ರಾಜ್ಯದ ಐವರು ಸಾಧಕರಿಂದ ಪ್ರಶಸ್ತಿ ಸ್ವೀಕಾರ
- ೨. ರಾಜ್ಯದ ಫೊರೆನ್ಸಿಕ್ ವಿಜ್ಞಾನ ಪ್ರಯೋಗಾಲಯದ ಸಾಧನೆ ರಾಷ್ಟ್ರಕ್ಕೆ ಮಾದರಿ- ಗೃಹ ಸಚಿವ ಪ್ರಿಯಾಂಕ್ ಖರ್ಗೆ
- ೩. ವಿಧಾನಪರಿಷತ್ ಚುನಾವಣೆಯಲ್ಲಿ ಅಡ್ಡಮತದಾನ; ರಾಜ್ಯ ಬಿಜೆಪಿ ನಾಯಕರಿಂದ ದೆಹಲಿಯಲ್ಲಿ ವರಿಷ್ಠರಿಗೆ ಪ್ರಾಥಮಿಕ ವರದಿ ಸಲ್ಲಿಕೆ
- ೪. ಶಿವಮೊಗ್ಗದಲ್ಲಿ ಹೈಕೋರ್ಟ್ ಪೀಠ ಸ್ಥಾಪನೆ ವಿಚಾರ; ರಾಜ್ಯಪಾಲರು ಮಧ್ಯಪ್ರವೇಶಿಸುವಂತೆ ಸಂಸದ ಬಿ.ವೈ.ರಾಘವೇಂದ್ರ ಮನವಿ
- ೫. ಕರಾವಳಿ ಜಿಲ್ಲೆಗಳಲ್ಲಿ ಇಂದಿನಿಂದ ಮೂರು ದಿನಗಳ ಕಾಲ ಭಾರೀ ಮಳೆ; ಹವಾಮಾನ ಇಲಾಖೆ ಮುನ್ಸೂಚನೆ

---

ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ನಡೆದ ಎರಡನೇ ನಾಗರಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ೨೦೨೬ ರ ಪದ್ಮ ಪ್ರಶಸ್ತಿಗಳನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಪ್ರದಾನ ಮಾಡಿದರು.

ಎರಡು ಪದ್ಮವಿಭೂಷಣ, ಏಳು ಪದ್ಮಭೂಷಣ ಮತ್ತು ೫೬ ಪದ್ಮಶ್ರೀ ಸೇರಿದಂತೆ ೬೫ ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು.

ಪ್ರತಿಷ್ಠಿತ ಪದ್ಮಶ್ರೀ ಪ್ರಶಸ್ತಿಗೆ ರಾಜ್ಯದ ಐವರು ಸಾಧಕರು ಭಾಜನರಾಗಿದ್ದು, ವೈದ್ಯಕೀಯ ಸೇವೆಗಾಗಿ ಡಾ.ಪ್ರಭಾಕರ್ ಕೋರೆ, ಶಿಕ್ಷಣ ತಜ್ಞ ಶಶಿ ಶೇಖರ್ ವೆಂಪತಿ, ಹಿಮೋಫಿಲಿಯಾ ರೋಗಿಗಳಿಗೆ ಉಚಿತ ಚಿಕಿತ್ಸೆ ಸಿಗುವಂತೆ ಮಾಡಿದ ವೈದ್ಯ ಡಾ.ಸುರೇಶ್ ಹನಗವಾಡಿ, ಭಾರತೀಯ ರಕ್ಷಣಾ ವಲಯವನ್ನು ಸ್ವಾವಲಂಬಿಯಾಗಿಸಿದ ವಿಜ್ಞಾನಿ ಡಾ.ಶುಭಾ ವೆಂಕಟೇಶ್ ಅಯ್ಯಂಗಾರ್ ಅವರು ರಾಷ್ಟ್ರಪತಿಯವರಿಂದ ಪ್ರಶಸ್ತಿ ಸ್ವೀಕರಿಸಿದರು.

ಉದ್ಯಮಿ ಟಿ.ಟಿ.ಜಗನ್ನಾಥನ್ ಅವರಿಗೆ ಮರಣೋತ್ತರವಾಗಿ ಸಂದ ಪ್ರಶಸ್ತಿಯನ್ನು ಅವರ ಪರವಾಗಿ ಅವರ ಪುತ್ರ ಮುಕುಂದ್ ಸ್ವೀಕರಿಸಿದರು.

---

ರಾಜ್ಯದ ಫೊರೆನ್ಸಿಕ್ ವಿಜ್ಞಾನ ಪ್ರಯೋಗಾಲಯ ನಿರ್ದೇಶನಾಲಯವು ರಾಷ್ಟ್ರವೇ ಹೆಮ್ಮೆಪಡುವಂತಹ ಸಾಧನೆ ಮಾಡಿದೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಬೆಂಗಳೂರಿನ ಮಡಿವಾಳದಲ್ಲಿರುವ ಎಫ್‌ಎಸ್‌ಎಲ್ ಕಚೇರಿಗೆ ಭೇಟಿ ನೀಡಿ ಪರಿಶೀಲನಾ ಸಭೆ ನಡೆಸಿದ ಸಚಿವರು, ಕರ್ನಾಟಕದ ಫೊರೆನ್ಸಿಕ್ ವಿಜ್ಞಾನ ಪ್ರಯೋಗಾಲಯವು ಅಪರಾಧ ತನಿಖೆಯಲ್ಲಿ ವೈಜ್ಞಾನಿಕ ನಿಖರತೆ, ತಾಂತ್ರಿಕ ಸಾಮರ್ಥ್ಯ ಮತ್ತು ವೇಗದ ವರದಿ ವ್ಯವಸ್ಥೆಯಲ್ಲಿ ದೇಶದ ಅತ್ಯುತ್ತಮ ಸಂಸ್ಥೆಗಳಲ್ಲಿ ಒಂದಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಕರ್ನಾಟಕ ಎಫ್‌ಎಸ್‌ಎಲ್‌ಗೆ ರಾಷ್ಟ್ರೀಯ ಮಾನ್ಯತಾ ಮಂಡಳಿ ಮಾನ್ಯತೆ ದೊರೆತಿದ್ದು, ಅಂತರರಾಷ್ಟ್ರೀಯ ಗುಣಮಟ್ಟದ ಮಾನದಂಡಗಳಡಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ಮೊದಲ ಬಾರಿಗೆ "ವೈಲ್ಡ್ ಲೈಫ್ ಫೊರೆನ್ಸಿಕ್ ಘಟಕ ಆರಂಭಿಸಲು ಎಲ್ಲಾ ಸಿದ್ಧತೆಗಳು ಪೂರ್ಣಗೊಂಡಿದ್ದು, ಶೀಘ್ರದಲ್ಲೇ ಕಾರ್ಯಾರಂಭ ಮಾಡಲಿದೆ ಎಂದು ಘೋಷಿಸಿದ್ದಾರೆ.

---

ವಿಧಾನಪರಿಷತ್ ಚುನಾವಣೆಯಲ್ಲಿ ಅಡ್ಡ ಮತದಾನ ಕುರಿತು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹಾಗೂ ಪ್ರತಿಪಕ್ಷ ನಾಯಕ ಆರ್.ಅಶೋಕ ನವದೆಹಲಿಯಲ್ಲಿಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರನ್ನು ಭೇಟಿಯಾಗಿ ಪ್ರಾಥಮಿಕ ವರದಿ ಸಲ್ಲಿಸಿದ್ದಾರೆ.

---

ಶಿವಮೊಗ್ಗದಲ್ಲಿ ಹೈಕೋರ್ಟ್ ಪೀಠ ಸ್ಥಾಪನೆ ಕುರಿತಂತೆ ರಾಜ್ಯಪಾಲರು ಮಧ್ಯಪ್ರವೇಶ ಮಾಡುವಂತೆ ಶಿವಮೊಗ್ಗ ಸಂಸದ ಬಿ.ವೈ.ರಾಘವೇಂದ್ರ ಒತ್ತಾಯಿಸಿದ್ದಾರೆ.

ಬೆಂಗಳೂರಿನ ಲೋಕಭವನದಲ್ಲಿಂದು ರಾಜ್ಯಪಾಲರಿಗೆ ಮನವಿ ಸಲ್ಲಿಸಿದ ಅವರು, ಶಿವಮೊಗ್ಗ ಜಿಲ್ಲೆ ಎಲ್ಲಾ ರೀತಿಯಲ್ಲೂ ಹೈಕೋರ್ಟ್ ಪೀಠ ಸ್ಥಾಪನೆಗೆ ಅರ್ಹವಾಗಿದೆ ಎಂದು ಹೇಳಿದ್ದಾರೆ.

ಮಲೆನಾಡು ಮತ್ತು ಮಧ್ಯಕರ್ನಾಟಕ ಪ್ರದೇಶಗಳಲ್ಲಿ ವಾಸಿಸುವ ಜನರಿಗೆ ಹೈಕೋರ್ಟ್ ಪೀಠ ಸ್ಥಾಪನೆಯಿಂದ ಸುಲಭವಾಗಿ ನ್ಯಾಯ ಸಿಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಶಿವಮೊಗ್ಗವನ್ನು ಮಂಗಳೂರಿನ ಪ್ರಸ್ತಾವಿತ ಪೀಠದ ವ್ಯಾಪ್ತಿಗೆ ತರುವ ಪ್ರಸ್ತಾಪಗಳ ಬಗ್ಗೆ ವಕೀಲರು, ಕಕ್ಷಿದಾರರು ಹಾಗೂ ಸಾರ್ವಜನಿಕರು ಕಳವಳ ವ್ಯಕ್ತಪಡಿಸಿದ್ದಾರೆ ಎಂದು ಅವರು ತಿಳಿಸಿದ್ದಾರೆ.

---

ಜುಲೈ ೨ನೇ ವಾರದಲ್ಲಿ ವಿಜಯಪುರ ಜಿಲ್ಲೆಯಲ್ಲಿ ಮಳೆಯಾಗುವ ಸಾಧ್ಯತೆಯಿದ್ದು, ಆದಾಗ್ಯೂ ಮಳೆ ಅಭಾವದಿಂದ ಜಿಲ್ಲೆಯಾದ್ಯಂತ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ವಿಜಯಪುರದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಮಾತನಾಡಿದ ಅವರು, ಈ ನಿಟ್ಟಿನಲ್ಲಿ ಜವಾಬ್ದಾರಿ ಅರಿತು ಅಧಿಕಾರಿಗಳು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದ್ದಾರೆ.

ಎಲ್ಲೆಲ್ಲಿ ನೀರಿನ ಸಮಸ್ಯೆ ಉಲ್ಬಣವಾಗಬಹುದು ಎಂಬುದರ ಬಗ್ಗೆ ಮುಂಚಿತವಾಗಿ ಮಾಹಿತಿ ಪಡೆದುಕೊಂಡು ಅಂತಹ ಸ್ಥಳದಲ್ಲಿ ಅಧಿಕಾರಿಗಳು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದ್ದಾರೆ.

ಮಳೆಯಾಗಿ ಒಳಹರಿವು ಹೆಚ್ಚಳವಾಗುವವರೆಗೆ ಜಲಾಶಯದಲ್ಲಿ ಸಾಕಷ್ಟು ಪ್ರಮಾಣದಲ್ಲಿ ಕುಡಿಯುವ ಉದ್ದೇಶಕ್ಕಾಗಿ, ನೀರನ್ನು ಕಾಯ್ದಿರಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

---

ದೆಹಲಿ ಮೂಲದ 'ಪ್ರಯಾಸ್' ಸಂಸ್ಥೆಯು ಬೆಳಗಾವಿಯ ಕೆ.ಎಲ್.ಇ. ಕನ್ವೆನ್ಷನ್ ಕೇಂದ್ರದಲ್ಲಿ ಇಂದಿನಿಂದ ಮೂರು ದಿನಗಳ ಕಾಲ ಆಯೋಜಿಸಿದ್ದ 'ಸೆಕೆಂಡ್ ವಿಷನ್ ಕರ್ನಾಟಕ -೨೦೨೪" ಬೃಹತ್ ಪ್ರದರ್ಶನಕ್ಕೆ ಸಂಸದ ಜಗದೀಶ್ ಶೆಟ್ಟರ್ ಚಾಲನೆ ನೀಡಿದರು.

ಕೇಂದ್ರ ಸರ್ಕಾರದ ಸಚಿವಾಲಯಗಳು, ರಾಜ್ಯ ಸರ್ಕಾರದ ಇಲಾಖೆಗಳು, ಸಂಶೋಧನಾ ಸಂಸ್ಥೆಗಳು, ಸಾರ್ವಜನಿಕ ವಲಯದ ಸಂಸ್ಥೆಗಳು, ಶೈಕ್ಷಣಿಕ ಹಾಗೂ ಹಣಕಾಸು ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ನೇರವಾಗಿ ವ್ಯವಹರಿಸಲು ನಾಗರಿಕರಿಗೆ ಒಂದು ಅನನ್ಯವಾದ ಅವಕಾಶ ಕಲ್ಪಿಸಲಾಗಿದೆ.

ಈ ವೇಳೆ ಮಾತನಾಡಿದ ಜಗದೀಶ್ ಶೆಟ್ಟರ್, ಕಳೆದ ವರ್ಷದಂತೆ ಈ ಸಲವೂ ಕರ್ನಾಟಕ ವಿಷನ್ ಪ್ರದರ್ಶನ ಯಶಸ್ಸು ಹೊಂದಿದ್ದು, ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ದೊರೆತಿದೆ ಎಂದು ತಿಳಿಸಿದ್ದಾರೆ.

---

ಕಾಂಗ್ರೆಸ್‌ಗಾಗಿ ಕೆಲಸ ಮಾಡದವರಿಗೆ ಪಕ್ಷದ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ಯು.ಟಿ.ಖಾದರ್ ಸ್ಪಷ್ಟಪಡಿಸಿದ್ದಾರೆ.

ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಅಲ್ಪಸಂಖ್ಯಾತರಿಗೆ ಸಚಿವ ಸ್ಥಾನ ಮಾತ್ರ ಅಲ್ಲ, ಎಲ್ಲವನ್ನೂ ಕೊಟ್ಟಿದೆ ಎಂದು ಹೇಳಿದ್ದಾರೆ.

---

ಬೆಂಗಳೂರು ಆಕಾಶವಾಣಿಯ ಸಿಬ್ಬಂದಿಗಾಗಿ ಬೆಂಗಳೂರಿನ-ನಿಮ್ಹಾನ್ಸ್ ಇಂದು ಸಮುದಾಯ ಸಂಪರ್ಕ ಕಾರ್ಯಕ್ರಮ ಆಯೋಜಿಸಿತ್ತು.

ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನಗರ ನರವಿಜ್ಞಾನ ಸಂಸ್ಥೆಯ ಹೆಚ್ಚುವರಿ ಪ್ರಾಧ್ಯಾಪಕ ಡಾ.ಅಜಯ್ ಕುಮಾರ್ ಸಿಬ್ಬಂದಿಗೆ ಉತ್ತಮ ಮಾನಸಿಕ ಆರೋಗ್ಯ ಕಾಪಾಡಿಕೊಳ್ಳುವ ಮಹತ್ವವನ್ನು ತಿಳಿಸಿದರು.

ಆತಂಕ, ಕೆಲಸದ ಒತ್ತಡ ಮತ್ತು ತಂತ್ರಜ್ಞಾನ ವ್ಯಸನವನ್ನು ನಿರ್ವಹಿಸಲು ಪ್ರಾಯೋಗಿಕ ತಂತ್ರಗಳನ್ನು ಅವರು ಪ್ರದರ್ಶಿಸಿದರು.

ಆರೋಗ್ಯಕರ ಕೆಲಸ, ಜೀವನ, ಸಮತೋಲನದ ಅಗತ್ಯವನ್ನು ಒತ್ತಿ ಹೇಳಿದರು.

ಬೆಂಗಳೂರು ಆಕಾಶವಾಣಿಯ ಉಪಮಹಾನಿದೇರ್ಶಕ ಕೆ.ಆರ್.ಸಂಜೀವ್ ಮಾತನಾಡಿ, ಮಾಹಿತಿಯುಕ್ತ ಮತ್ತು ಸಂವಾದಾತ್ಮಕ ಕಾರ್ಯಕ್ರಮ ನಡೆಸಿದ್ದಕ್ಕಾಗಿ ನಿಮ್ಹಾನ್ಸ್ ಸೇವೆಯನ್ನು ಶ್ಲಾಘಿಸಿದರು.

---

ಯುವಜನತೆ ಮಾದಕ ವಸ್ತುಗಳ ವ್ಯಸನದಿಂದ ಮುಕ್ತರಾಗಿ ಸದೃಢ ಭಾರತ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ದಾವಣಗೆರೆ ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ.ಸಿ ರಂಗೇಗೌಡ ಕರೆ ನೀಡಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ವಿಶೇಷಚೇತನ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ 'ನಶಮುಕ್ತ ಭಾರತ' ಜಾಗೃತಿ ಬೈಕ್ ರ‍್ಯಾಲಿಗೆ ಚಾಲನೆ ನೀಡಿ ಅವರು ಮಾತನಾಡಿದರು.

---

ಜಲಸಂಪನ್ಮೂಲ ಇಲಾಖೆ ಹಾಗೂ ತುಂಗಭದ್ರಾ ಮಂಡಳಿಯ ಸಹಯೋಗದೊಂದಿಗೆ ತುಂಗಭದ್ರಾ ಜಲಾಶಯಕ್ಕೆ ನೂತನವಾಗಿ ಅಳವಡಿಸಿದ ೩೩ ಕ್ರಸ್ಟ್ ಗೇಟುಗಳ ಲೋಕಾರ್ಪಣೆ ಕಾರ್ಯಕ್ರಮ ನಾಡಿದ್ದು, ಕೊಪ್ಪಳ ಜಿಲ್ಲೆಯ ಮುನಿರಾಬಾದ್ ಸರ್ಕಾರಿ ಹೈಸ್ಕೂಲ್ ಮೈದಾನದಲ್ಲಿ ಜರುಗಲಿದೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಲಿದ್ದಾರೆ. ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್, ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು, ತೆಲಂಗಾಣ ಮುಖ್ಯಮಂತ್ರಿ ಎ.ರೇವಂತ್ ರೆಡ್ಡಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.

---

ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ವಾರ್ಷಿಕ ಬಿಸಿಯು ಉತ್ಸವದ ಅಂಗವಾಗಿ ಸೆಂಟ್ರಲ್ ಕಾಲೇಜಿನ ಕ್ರಿಕೆಟ್ ಮೈದಾನದಲ್ಲಿ ಆಯೋಜಿಸಿರುವ ೨೦೨೫-೨೬ನೇ ಸಾಲಿನ ಕ್ರೀಡಾಕೂಟವನ್ನು ಕುಲಪತಿ ಪ್ರೊಫೆಸರ್ ರಮೇಶ್.ಬಿ. ಬಲೂನ್ ಹಾರಿಬಿಡುವ ಮೂಲಕ ಚಾಲನೆ ನೀಡಿದರು.

ಸ್ನಾತಕೋತ್ತರ ವಿದ್ಯಾರ್ಥಿಗಳಿಗಾಗಿ ಏರ್ಪಡಿಸಲಾಗಿರುವ ಎರಡು ದಿನಗಳ ಈ ಅಂತರ ವಿಭಾಗ ಕ್ರೀಡಾಕೂಟದಲ್ಲಿ ಭಾಗವಹಿಸಿರುವ ಕ್ರೀಡಾಪಟುಗಳನ್ನು ಉದ್ದೇಶಿಸಿ ಮಾತನಾಡಿದ ಅವರು ದೈಹಿಕ ಮತ್ತು ಮಾನಸಿಕ ಸದೃಢತೆಗೆ ಕ್ರೀಡೆ ಅತ್ಯಂತ ಉಪಯುಕ್ತ ಎಂದು ತಿಳಿಸಿದರು.

ಕ್ರೀಡೆಯಲ್ಲಿ ಸೋಲಿನಿಂದ ಕಲಿಯಬಹುದಾದ ಪಾಠ ನಿಮ್ಮನ್ನು ಪರಿಪಕ್ವಗೊಳಿಸುವುದು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

---

ಇನ್ನು ಹವಾವರ್ತಮಾನ...

ರಾಜ್ಯದಲ್ಲಿ ಮುಂಗಾರು ತುಸು ಬಿರುಸುಗೊಂಡಿದ್ದು, ಉಡುಪಿ, ಉತ್ತರಕನ್ನಡ, ದಕ್ಷಿಣ ಕನ್ನಡ ಸೇರಿದಂತೆ ಕರಾವಳಿಯ ಹಲವೆಡೆ ಇಂದಿನಿಂದ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ದಾವಣಗೆರೆ, ಚಿಕ್ಕಮಗಳೂರು, ಹಾಸನ, ಕೊಡಗು, ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ತುಮಕೂರು, ವಿಜಯನಗರ ಜಿಲ್ಲೆಗಳ ಹಲವೆಡೆ ಗುಡುಗು ಸಹಿತ ಸಾಧಾರಣ ಮಳೆಯಾಗಲಿದೆ.

ಬೆಂಗಳೂರಿನಲ್ಲಿ ಇದೇ ೨೮ರವರೆಗೆ ಮೋಡಕವಿದ ವಾತಾವರಣದೊಂದಿಗೆ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಬೆಂಗಳೂರಿನಲ್ಲಿ ಗರಿಷ್ಠ ತಾಪಮಾನ ೩೦ ಡಿಗ್ರಿ ಸೆಲ್ಸಿಯಸ್ ಇದ್ದು, ಕನಿಷ್ಠ ತಾಪಮಾನ ೨೧ ಡಿಗ್ರಿ ಸೆಲ್ಸಿಯಸ್ ಇರಲಿದೆ.

---

ದೇಶಾದ್ಯಂತ ಇದೇ ೨೮ ರಿಂದ ಜುಲೈ ೧ರವರೆಗೆ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಆಯೋಜಿಸಲಾಗಿದೆ.

ಮಂಡ್ಯ ಜಿಲ್ಲೆಯಲ್ಲಿ ೫ ವರ್ಷದೊಳಗಿನ ಯಾವುದೇ ಮಗುವು ಲಸಿಕೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

೨೦೧೪ ರಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಭಾರತವನ್ನು ಪೋಲಿಯೋ ಮುಕ್ತ ದೇಶ ಎಂದು ಘೋಷಿಸಿದೆ. ಆದರೂ ನೆರೆಯ ರಾಷ್ಟ್ರಗಳಾದ ಪಾಕಿಸ್ತಾನ ಮತ್ತು ಅಫಘಾನಿಸ್ತಾನಗಳಲ್ಲಿ ಕೆಲವು ಪೋಲಿಯೊ ಪ್ರಕರಣಗಳು ವರದಿಯಾಗುತ್ತಿದ್ದು, ಹೆಚ್ಚಿನ ನಿಗಾ ವಹಿಸುವ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಭಾರತದಲ್ಲಿ ಪಲ್ಸ್ ಪೋಲಿಯೊ ಕಾರ್ಯಕ್ರಮ ಮುಂದುವರಿಸಲಾಗಿದೆ.

__________ ಮುಕ್ತಾಯ __________